ರೆವಿನ್ಯೂ ನಿವೇಶನಗಳಲ್ಲಿ ಅನಧಿಕೃತವಾಗಿ ಕಟ್ಟಿರುವ ಮನೆಗಳನ್ನು ಸಕ್ರಮಗೊಳಿಸುವಿಕೆ.

೩೩೮. ಶ್ರೀ ಶಫಿಅಹಮ್ಮದ್ (ತುಮಕೂರು).— ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ತುಮಕೂರು ಜಿಲ್ಲೆಯಂಗನಗರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಕಟ್ಟಲಾಗಿರುವ ಕಟ್ಟಡಗಳನ್ನು ಸಕ್ರಮಗೊಳಿಸಲು ತೆಗೆದುಕೊಂಡಿರುವ ಕ್ರಮವೇನು ?

ಆ) ಸಕ್ರಮಗೊಳಿಸಬೇಕಾಗಿರುವ ಅನಧಿಕೃತ ಕಟ್ಟಡಗಳ ಸಂಖ್ಯೆ ಹಾಗೂ ಈ ಸಕ್ರಮಗೊಳಿಸುವಿಕೆಯಿಂದ ಸರ್ಕಾರವು ನಿರೀಕ್ಷಿಸುವ ಮೊತ್ತವೆಷ್ಟು ?

ಶ್ರೀ ಟಿ.ಎನ್. ನರಸಿಂಹಮೂರ್ತಿ (ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ ಮಂತ್ರಿಗಳು).—

ಅ) ಅನಧಿಕೃತ ಕಟ್ಟಡಗಳ ವಿಚಾರಣೆಯಿಂದ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು ಅಭಿವೃದ್ಧಿ ಶುಲ್ಕ ಹಾಗೂ ಇತರೆ ಶುಲ್ಕಗಳನ್ನು ವಸೂಲಿ ಮಾಡುವ ಬಗ್ಗೆ ವಿಧಿ ವಿಧಾನಗಳನ್ನು ರೂಪಿಸಲಾಗುತ್ತಿದೆ.

ಆ) ಇದುವರೆವಿಗೂ ಗುರುತಿಸಿದ ಅನಧಿಕೃತ ಕಟ್ಟಡಗಳನ್ನು ಸಕ್ರಮಗೊಳಿಸುವಲ್ಲಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ೯೨೨೬ ? ಸಕ್ರಮಗೊಳಿಸಲು, ಕಾನೂನಿನ ಪ್ರಕಾರ ಅವಕಾಶವಿದ್ದಲ್ಲಿ, ಇದರಿಂದ ವಸೂಲಾಗುವ ನಿಖರವಾದ ಆದಾಯವೆಷ್ಟು ಎಂಬುದನ್ನು ಈ ಹಂತದಲ್ಲಿ ಅಂದಾಜು ಮಾಡಲಾಗುವುದಿಲ್ಲ

ಅಧ್ಯಕ್ಷರು.— ಈಗ ಲಿಖಿತ ಮೂಲಕ ಉತ್ತರಿಸಲಾಗುವ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

ಶ್ರೀ ಕೆ.ಹೆಚ್. ಪಾಟೀಲ್.— ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ರಾಜ್ಯದಲ್ಲಿರುವ ಐ.ಎ.ಎಸ್. ಮತ್ತು ಐ.ಪಿ.ಎಸ್. ಅಧಿಕಾರಿಗಳ ವರ್ಗವಾರು

೮೫೯. ಶ್ರೀ ಎಂ. ನಾರಾಯಣಸ್ವಾಮಿ (ಚೇತಮಂಗಲ).— ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಐ.ಎ.ಎಸ್. ಹಾಗೂ ಐ.ಪಿ.ಎಸ್. ಅಧಿಕಾರಿಗಳ ಸಂಖ್ಯೆ ಎಷ್ಟು ? ಈಗ ಅವರುಗಳು ಎಲ್ಲೆಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ? (ಹೆಸರು ಪದನಾಮಗಳ ಪೂರ್ಣ ವಿವರಗಳನ್ನು ನೀಡುವುದು)

ಆ) ಈ ಎರಡೂ ಉನ್ನತ ದರ್ಜೆಯ ಅಧಿಕಾರಿಗಳ ಜಾತಿವಾರು ವಿವರಗಳನ್ನು ನೀಡುವುದು ?

ಶ್ರೀ ವೀರೇಂದ್ರ ಪಾಟೀಲ್ (ಮುಖ್ಯ ಮಂತ್ರಿಗಳು).—

ಅ) ರಾಜ್ಯದಲ್ಲಿ ಒಟ್ಟು ೨೫೬ ಐ.ಎ.ಎಸ್. ಹಾಗೂ ೧೦೯ ಐ.ಪಿ.ಎಸ್. ಅಧಿಕಾರಿಗಳಿದ್ದಾರೆ. ಅಧಿಕಾರಿಗಳ ಹೆಸರು ಮತ್ತು ಪದನಾಮಗಳ ಪಟ್ಟಿಯನ್ನು ಲಗತ್ತಿಸಿದೆ.

ಆ) ಈ ಬಗ್ಗೆ ಸರ್ಕಾರದಲ್ಲಿ ಮಾಹಿತಿಯಿಲ್ಲ.